ಇ.ಎಸ್.ಐ.ಸಿ. ವೈದ್ಯಕೀಯ ಕಾಲೇಜು

966(286); ಶ್ರೀ ಗೋಪಾಲಯ್ಯ .ಕೆ.

ಅ) ಬೆಂಗಳೂರಿನ ರಾಜಾಜಿನಗರದಲ್ಲಿರುವ ಇ.ಎಸ್.ಐ.ಸಿ ವೈದ್ಯಕೀಯ ಕಾಲೇಜಿಗೆ 2015–16 ರಿಂದ ವಿದ್ಯಾರ್ಥಿಗಳ ಪ್ರವೇಶವನ್ನು ನಿಲ್ಲಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಹಾಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಅವಧಿ ಪೂರ್ಣವಾಗುವರೆಗೆ ಈ ಕಾಲೇಜನ್ನು ರಾಜ್ಯ ಸರ್ಕಾರದ ವಶಕ್ಕೆ ಪಡೆಯಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಕಾರ್ಮಿಕ ರಾಜ್ಯ ಸಚಿವರು)

ಅ) ರಾಜಾಜಿನಗರದಲ್ಲಿರುವ ಇ.ಎಸ್.ಐ.ಸಿ ವೈದ್ಯಕೀಯ ಕಾಲೇಜಿಗೆ ಭಾರತೀಯ ವೈದ್ಯಕೀಯ ಪರಿಷತ್ತು 2015–16ನೇ ಸಾಲಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳ ಪ್ರವೇಶಕ್ಕೆ ಮಂಜೂರಾತಿ ನೀಡಿರುವುದಿಲ್ಲ. ಈ ಸಂಬಂಧ ಕಾ.ರಾ.ವಿ. ನಿಗಮವು ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ 2015–16 ನೇ ಸಾಲಿನ ವೈದ್ಯಕೀಯ ಶಿಕ್ಷಣದ ಪ್ರವೇಶಕ್ಕಾಗಿ ಅನುಮತಿಯನ್ನು ನೀಡುವಂತೆ ಮನವಿ ಸಲ್ಲಿಸಿರುತ್ತದೆ.

ಆ) ಈ ವೈದ್ಯಕೀಯ ಕಾಲೇಜನ್ನು ಪ್ರಸ್ತುತ ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸುವ ಯಾವುದೇ ಪ್ರಸ್ತಾವನೆ ಸ್ವೀಕರಿಸಿರುವುದಿಲ್ಲ. ಸದರಿ ಕಾಲೇಜನ್ನು ಕಾ.ರಾ.ವಿ. ನಿಗಮವೇ ಮುಂದುವರಿಸುತ್ತದೆ.